ಶಿಥಿಲಗೊಂಡಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಕಟ್ಟಡಗಳ ದುರಸ್ತಿ

212 (308), ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) ಹಿರೇಕೆರೂರು ತಾಲ್ಲೂಕು ಕೇಂದ್ರದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕಟ್ಟಡ ಶಿಥಿಲಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಶಿಥಿಲಗೊಂಡಿರುವ ಕಟ್ಟಡಗಳನ್ನು ಕೂಡಲೇ ದುರಸ್ತಿಪಡಿಸಲು ಸರ್ಕಾರ ಏನು ಕ್ರಮ ಕೈಗೊಳ್ಳಲಿದೆ?

ಶ್ರೀ ಆರ್.ವಿ.ದೇಶಪಾಂಡೆ (ಉನ್ನತ ಶಿಕ್ಷಣ ಸಚಿವರು)

ಅ) ಇಲ್ಲ

ಆ) ಉದ್ಭವಿಸುವುದಿಲ್ಲ.

ವಿಶೇಷ ವರ್ಗದ ಜನರಿಗೆ ಮನೆ ನಿರ್ಮಾಣ

213 (309), ಶ್ರೀ ಬಣಕಾರ್ ಯು.ಬಿ. (ಹಿರೇಕೆರೂರು)

ಅ) 2014–15ನೇ ಸಾಲಿನಲ್ಲಿ ವಿಶೇಷ ವರ್ಗದ ಜನರಿಗೆ ಎಷ್ಟು ಮನೆಗಳನ್ನು ಕಟ್ಟಲು ಉದ್ದೇಶಿಸಲಾಗಿದೆ;

ಆ) ಕಾರ್ಯಕ್ರಮದ ಪಟ್ಟಿಯಂತೆ ದಿನಾಂಕ:15.11.2014ರೊಳಗಾಗಿ ಎಷ್ಟು ತಾಲ್ಲೂಕುಗಳಲ್ಲಿ ಸರ್ವೆ ಕಾರ್ಯ ಮುಗಿಸಲಾಗಿದೆ.

ಇ) ಸರ್ವೆ ಕಾರ್ಯ ಮುಗಿದ ತಾಲ್ಲೂಕುಗಳಲ್ಲಿ ವರ್ಗವಾರು ನಿವೇಶನ ಹೊಂದಿರುವವರ ಮತ್ತು ಹೊಂದದೆ ಇರುವವರ ಸಂಖ್ಯೆ ಎಷ್ಟು?

ಶ್ರೀ ಡಾ॥ ಎಂ.ಹೆಚ್.ಅಂಬರೀಷ್ (ವಸತಿ ಸಚಿವರು)